# ವಿಧಾನ ಪರಿಷತ್ತು

ಮಾನ ವಿಧಾನ ಸಭೆಯ ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ, ಇವರು ನಿಯಮ-72ರಡಿ ರಾಜ್ಯದಲ್ಲಿ ಸಂಭವಿಸುತ್ತಿರುವ ಹೃದಯಾಘಾತ ಸಾವುಗಳ ಬಗ್ಗೆ:

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ:-

*****

ರಾಜ್ಯದಲ್ಲಿ ಹೃದಯಾಘಾತದಿಂದ ಮರಣ ಪ್ರಕರಣಗಳು ವರದಿಯಾಗುತ್ತಿದ್ದು, ಈ ಬಗ್ಗೆ ಅಧ್ಯಯನ ನಡೆಸಲು ಡಾ|| ಕೆ.ಎಸ್. ರವೀಂದ್ರನಾಥ್, ನಿರ್ದೇಶಕರು, ಶ್ರೀ ಜಯದೇವ ಹೃದ್ರೋಗ ಸಂಸ್ಥೆ, ಬೆಂಗಳೂರು ಇವರ ನೇತೃತ್ವದಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯು ನೀಡಿರುವ ವರದಿಯಲ್ಲಿನ ಪ್ರಮುಖ ಶಿಫಾರಸ್ಸುಗಳು ಈ ಕೆಳಕಂಡಂತಿದೆ:

- ಹೃದಯಾಘಾತ / ತೀವ್ರ ಹೃದಯಾಘಾತ ಪ್ರಕರಣಗಳಲ್ಲಿ ಹೆಚ್ಚು ಜನರು ಒಂದಕ್ಕಿಂತ ಹೆಚ್ಚು ಹೃದಯದ ಅಪಾಯಕಾರಿ ಅಂಶವನ್ನು ಹೊಂದಿರುತ್ತಾರೆ. ಅದರಲ್ಲಿ ಮುಖ್ಯವಾಗಿ ದೈಹಿಕ ಚಟುವಟಿಕೆಗಳಲ್ಲಿ ತೊಡಗದೆ ಇರುವುದು (ಜೀವನ ಶೈಲಿ ಬದಲಾವಣೆ), ಅನಾರೋಗ್ಯಕರ ಆಹಾರ ಪದ್ಧತಿ, ಮಾನಸಿಕ ಒತ್ತಡ, ಅತಿಯಾದ ದೇಹದ ತೂಕ ಅಥವಾ ಬೊಜ್ಜುತನ, ಅತಿಯಾದ ಮದ್ಯಪಾನ, ಮಧುಮೇಹ, ಧೂಮಪಾನ, ಅಧಿಕ ರಕ್ತದೊತ್ತಡ, ಕುಟುಂಬದ ಹೃದ್ರೋಗದ ಹಿನ್ನೆಲೆ ಹೊಂದಿರುತ್ತಾರೆ.
- ಹೃದಯ ಆರೋಗ್ಯ ಕಣ್ಗಾವಲು ಮೂಲಕ ಆಸ್ಪತ್ರೆಯ ಹೊರಗಿನ ಹಠಾತ್ ಸಾವುಗಳಿಗೆ ಕಡ್ಡಾಯ ಶವ ಪರೀಕ್ಷೆಗಳನ್ನು ನಡೆಸಲು ಕ್ರಮಕೈಗೊಳ್ಳುವುದು.
- ತ್ವರಿತ ಹೃದಯ ಚಿಕಿತ್ಸಾ ವ್ಯವಸ್ಥೆಯನ್ನು ಬಲಪಡಿಸುವ ಸಲುವಾಗಿ ECG ಯಂತ್ರಗಳು, CPR ತರಬೇತಿ, ಸಾರ್ವಜನಿಕ ಸ್ಥಳಗಳಲ್ಲಿ AED ಗಳ ಸ್ಥಾಪನೆಗೆ ಕ್ರಮಕೈಗೊಳ್ಳುವುದು..
- ವಾಹನ ಚಾಲಕರಂತಹ ಅಪಾಯದ ಗುಂಪುಗಳಿಗೆ ಹೃದಯ ಕಾಯಿಲೆ ಬಗ್ಗೆ ಆರೋಗ್ಯ ತಪಾಸಣೆಗಳನ್ನು ಹಾಗೂ ಜನಜಾಗೃತಿ ಅಭಿಯಾನಗಳನ್ನು ಆರಂಭಿಸಲು ಕ್ರಮಕೈಗೊಳ್ಳುವುದು.
- ಹೆಚ್ಚು ಜನಸಂದಾಯವಿರವ ಪ್ರದೇಶಗಳಲ್ಲಿ ಹೃದಯ ಸಂಬಂಧಿ ಸಾವುಗಳನ್ನು ತಡೆಯಲು ಅಳವಡಿಸುವುದು.

ಸಮಿತಿಯು ಹೃದಯ ಆರೋಗ್ಯದ ಬಗ್ಗೆ ರಾಜ್ಯ ಮಟ್ಟದಲ್ಲಿ ಸಮಗ್ರ ಮತ್ತು ತ್ವರಿತ ಕ್ರಮ ತೆಗೆದುಕೊಳ್ಳಬೇಕೆಂದು ಶಿಫಾರಸ್ಸನ್ನು ಮಾಡಿರುತ್ತದೆ.

ರಾಜ್ಯದಲ್ಲಿ ಹೆಚ್ಚುತ್ತಿರುವ ಹೃದಯಾಘಾತ ಮತ್ತು ಹೃದಯ ಸ್ತಂಭನ ಪ್ರಕರಣಗಳಿಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಈ ಕೆಳಕಂಡಂತೆ ಕ್ರಮವಹಿಸಲಾಗಿರುತ್ತದೆ.

1)ಗೃಹ ಆರೋಗ್ಯ ಯೋಜನೆ ಮೂಲಕ ಅಸಾಂಕ್ರಾಮಿಕ ರೋಗಗಳನ್ನು ಪತ್ತೆ ಹಚ್ಚಲು ಮತ್ತು ಹೃದಯಾಘಾತಕ್ಕೆ ಕಾರಣವಾದ ಅಪಾಯಕಾರಿ ಅಂಶಗಳನ್ನು ಪತ್ತೆ ಮಾಡಲು 30 ವರ್ಷ ಮೇಲ್ಪಟ್ಟವರಿಗೆ ತಪಾಸಣೆ ಮಾಡಲು ಕ್ರಮವಹಿಸಲಾಗಿರುತ್ತದೆ.

2) ಡಾ. ಪುನೀತ್ ರಾಜ್‌ಕುಮಾರ್ ಹೃದಯ ಜ್ಯೋತಿ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ವಿಸ್ತರಿಸಲು ಕ್ರಮ ವಹಿಸಲಾಗುತ್ತಿದೆ. ಸದರಿ ಕಾರ್ಯಕ್ರಮದಡಿ ಕಳೆದ 03 ವರ್ಷಗಳಲ್ಲಿ ಹೃದಯಾಘಾತವಾದ ಪ್ರಕರಣಗಳ ವಿವರ ಈ ಕೆಳಕಂಡಂತಿದೆ ಮತ್ತು Critical ECG ಗಳಿಗೆ ಹೆಚ್ಚಿನ ಚಿಕಿತ್ಸೆಗಾಗಿ ತೃತೀಯ ಹಂತದ ಆಸ್ಪತ್ರೆಗಳಿಗೆ ಕಳುಹಿಸಿಕೊಡಲಾಗುವುದು.

- 2023-24ನೇ ಸಾಲಿನಲ್ಲಿ (ರಾಜ್ಯದ ಮೊದಲನೆ ಹಂತದ 45 ಕೇಂದ್ರಗಳಲ್ಲಿನ ಮಾಹಿತಿ)
  ಒಟ್ಟು ECG- 1,53,931
  Critical ECG- 2,489
  ಒಟ್ಟು ಮರಣಗಳ ಸಂಖ್ಯೆ: 229
- 2024-25ನೇ ಸಾಲಿನಲ್ಲಿ (ರಾಜ್ಯದ ಮೊದಲನೆ ಮತ್ತು ಎರಡನೆ ಹಂತದ (45+41) 86 ಕೇಂದ್ರಗಳಲ್ಲಿನ ಮಾಹಿತಿ)
  ಒಟ್ಟು ECG- 4,49,203

Critical ECG- 6,767
ಮರಣಗಳಸಂಖ್ಯೆ: 608

- 2025-26ನೇ ಸಾಲಿನಲ್ಲಿ ಈವರೆಗೆ (ರಾಜ್ಯದ ಮೊದಲನೆ ಮತ್ತು ಎರಡನೆ ಹಂತದ (45+41) 86 ಕೇಂದ್ರಗಳಲ್ಲಿನ ಮಾಹಿತಿ)

  ಒಟ್ಟು ECG- 2,31,501
  Critical ECG- 3,018
  ಒಟ್ಟು ಮರಣಗಳ ಸಂಖ್ಯೆ: 167

3) ಶಾಲಾ-ಕಾಲೇಜುಗಳಲ್ಲಿ, ಜಿಮ್‌ಗಳಲ್ಲಿ, ಸಂಸ್ಥೆಗಳಲ್ಲಿ, ಸಾರ್ವಜನಿಕರಿಗೆ ಸಿ.ಪಿ.ಆರ್ ತರಬೇತಿ, ಜನಜಾಗೃತಿ ಹಾಗೂ ಆರೋಗ್ಯ ತಪಾಸಣೆ ಶಿಬಿರಗಳನ್ನು ಹಮ್ಮಿಕೊಳ್ಳಲು ಕ್ರಮವಹಿಸಲಾಗಿದೆ.

**ಆಕುಕ 91 ಎಸ್‌ಎಂಎಂ 2025**

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಸಚಿವರು